ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 68 (143)

ಸದಸ್ಯರ ಹೆಸರು : ಶ್ರೀ ಚಿದಾನಂದ್ ಎಂ. ಗೌಡ (ಪದವೀಧರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : ದಿನಾಂಕ:01-02-2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಶಾಲಾ ಸಹ ಶಿಕ್ಷಕರ (1 ರಿಂದ 5ನೇ ತರಗತಿ ಬೋಧಿಸುವವರು) ಸಂಖ್ಯೆ ಎಷ್ಟು;	ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಶಾಲಾ ಸಹ ಶಿಕ್ಷಕರ (1 ರಿಂದ 5ನೇ ತರಗತಿ ಬೋಧಿಸುವವರು) ಸಂಖ್ಯೆ : 1,26,063
ಆ.	ಮೇಲ್ಕಂಡ ಶಿಕ್ಷಕರಲ್ಲಿ ಪದವೀಧರ ಶಿಕ್ಷಕರ ಸಂಖ್ಯೆ ಎಷ್ಟು;	ಪದವೀಧರ ಶಿಕ್ಷಕರ ಸಂಖ್ಯೆ: 21,282
ಇ.	ಪದವೀಧರ ಪ್ರಾಥಮಿಕ ಪದವಿ ಶಿಕ್ಷಕರನ್ನು 6 ಮತ್ತು 7ನೇ ತರಗತಿಗೆ ಬೋಧಿಸಲು ಖಾಲಿ ಇರುವ ಹುದ್ದೆಗಳಿಗೆ ವಿಲೀನ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ? (ಮಾಹಿತಿ ನೀಡುವುದು)	ಇಲ್ಲ, ಆದರೆ, ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 626 ಪಿಬಿಎಸ್ 2014 ದಿನಾಂಕ:07-08-2017ರ ಪ್ರಕಾರ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿನ ಪದವೀಧರ (6 ರಿಂದ 8ನೇ ತರಗತಿಗಳ) ಹುದ್ದೆಗಳ ನೇಮಕಾತಿಯಲ್ಲಿ ನಿಯಮಗಳಂತೆ 1 ರಿಂದ 5ನೇ ತರಗತಿಗಳ ವೃಂದದಿಂದ ಪದವೀಧರ ಪ್ರಾಥಮಿಕ ಶಿಕ್ಷಕರ 6 ರಿಂದ 8ನೇ ತರಗತಿಗಳು ವೃಂದಕ್ಕೆ ಸೇವಾ ನಿರತರ ಕೋಟಾದಡಿ ಪರೀಕ್ಷೆ ಮುಖಾಂತರ "ಸೇವಾ ನಿರತರ ನೇಮಕಾತಿಗೆ" ಅವಕಾಶ ಇರುತ್ತದೆ. ಹಾಗೆಯೇ, ನೇರ ನೇಮಕಾತಿ ಹಾಗೂ ಸೇವಾ ನಿರತರ ಶೇ 75:25 ಪ್ರಮಾಣ ನಿಗದಿ ಇದೆ. ಮತ್ತು ಪರೀಕ್ಷೆ ಮುಖಾಂತರ ಮಾತ್ರ ಸೇವಾ ನಿರತರಿಗೆ ನೇಮಕಾತಿಗೆ ಅವಕಾಶವಿದೆ. ಈ ವಿಷಯದಲ್ಲಿ ರಾಜ್ಯ ಪ್ರಾಥಮಿಕ ಶಾಲಾ
		ಶಿಕ್ಷಕರ ಸಂಘದಿಂದ, ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8ನೇ ತರಗತಿಗಳು) ವೃಂದಕ್ಕೆ

		ಸೇವಾ ನಿರತ ಕೋಟಾದಡಿ ಪರೀಕ್ಷೆ ಮುಖಾಂತರ ಇರುವುದನ್ನು ಬದಲಾವಣೆ ಮಾಡುವುದರ ಜೊತೆಗೆ ಬಡ್ತಿ ಪ್ರಮಾಣ 25 ರಿಂದ ಶೇ 50 ಕ್ಕೆ ಹೆಚ್ಚಿಸಲು ಕೋರಿಕೆಗಳು ಸ್ವೀಕೃತವಾಗಿದ್ದು, ತಿದ್ದುಪಡಿ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಇಪಿ 2 ಪಿಎಂಎ 2020

(ಎಸ್. ಸುರೇಶ್‌ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಹಾಗೂ ಸಕಾಲ ಸಚಿವರು